**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/03/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01.
ದಿನಾಂಕ:27-06-2017

**ಸುತ್ತೋಲೆ**

ವಿಷಯ: ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರ ಅಳವಡಿಸುವ ಕುರಿತು
ಉಲ್ಲೇಖ: ತಾಂತ್ರಿಕ ಪರೀಕ್ಷಾ ಮಂಡಳಿಯ 166ನೇ ಕೇಂದ್ರ ಸಭೆಯ ನಿರ್ಣಯ ದಿ:19-06-2017

**************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಿಪ್ಲೋಮ ಪರೀಕ್ಷೆಗಳಲ್ಲಿ ಶಿಸ್ತು /ಪಾರದರ್ಶಕತೆ ತರುವ ಹಾಗೂ ಮಾಲ್‌ಪ್ರಾಕ್ಟೀಸ್ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರ ಅಳವಡಿಸುವ ನಿರ್ಣಯವನ್ನು ಉಲ್ಲೇಖಿತ ತಾಂತ್ರಿಕ ಪರೀಕ್ಷಾ ಮಂಡಳಿಯ 166 ಕೇಂದ್ರ ಸಭೆಯಲ್ಲಿ ನಿರ್ಣಯಿಸಲಾಗಿದೆ. ಪ್ರಯುಕ್ತ ಎಲ್ಲಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳು ತಮ್ಮ ಸಂಸ್ಥೆಗಳ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರಗಳನ್ನು ದಿನಾಂಕ:30-07-2017 ರೊಳಗೆ ಅಳವಡಿಸಲು ಕ್ರಮಕೈಗೊಳ್ಳುವಂತೆ ಹಾಗೂ ಈ ಕುರಿತು ಮಂಡಳಿಗೆ ಮಾಹಿತಿ ನೀಡುವಂತೆ ತಿಳಿಸಲಾಗಿದೆ. ಸದರಿ ನಿಗದಿತ ಅವಧಿಯೊಳಗೆ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರ ಅಳವಡಿಸಿಕೊಳ್ಳದ ಪರೀಕ್ಷಾ ಕೇಂದ್ರಗಳನ್ನು ರದ್ದುಗೊಳಿಸಲಾಗುವುದು ಹಾಗೂ ಅವುಗಳನ್ನು ಬೇರೆ ಪರೀಕ್ಷಾ ಕೇಂದ್ರಗಳಿಗೆ ಜೋಡಿಸಲಾಗುವುದು ಎಂದು ತಿಳಿಸಲಾಗಿದೆ. ಈ ನಿಟ್ಟಿನಲ್ಲಿ ಸೂಕ್ತ ಕ್ರಮಕೈಗೊಳ್ಳುವಂತೆ ಎಲ್ಲಾ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರ – ವೆಬ್‌ಪೋರ್ಟಲ್ ನಲ್ಲಿ ಮತ್ತು www.btekarlinx.net ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ